# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1099 |
| ಸದಸ್ಯರ ಹೆಸರು | ಡಾ॥ ಚಂದ್ರಶೇಖರ್ ಬಿ ಪಾಟೀಲ್ |
| ಉತ್ತರಿಸುವ ದಿನಾಂಕ | 28-12-2022 |
| ಉತ್ತರಿಸುವವರು | ಧಾರ್ಮಿಕ ದತ್ತಿ, ಹಜ್ ಹಾಗೂ ವಕ್ಫ್ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಪ್ಪಳ ಜಿಲ್ಲೆ ಶ್ರೀ ಹುಲಿಗೆಮ್ಮ ದೇವಸ್ಥಾನ ಅಭಿವೃದ್ಧಿ ಪಡಿಸಲು ಸರ್ಕಾರದ ಅನುಮತಿ ಕೋರಿ ಇಲ್ಲಿಯವರೆಗೆ ಅನುಮತಿ ನೀಡದಿರಲು ಕಾರಣವೇನು: | ಕೊಪ್ಪಳ ಜಿಲ್ಲೆ ಶ್ರೀ ಹುಲಿಗೆಮ್ಮ ದೇವಸ್ಥಾನ ಅಭಿವೃದ್ಧಿ ಕಾಮಗಾರಿಗೆ ಸಂಬಂಧಿಸಿದಂತೆ ಪ್ರಸ್ತುತ ಯಾವುದೇ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿ ಬಾಕಿ ಇರುವುದಿಲ್ಲ. |
| ಆ) | ದೇವಸ್ಥಾನ ಸಮಿತಿ ಯಾವುದೇ ಸರ್ಕಾರದ ಅಪೇಕ್ಷೆ ಪಡೆಯದೇ ದೇವಸ್ಥಾನ ಅಭಿವೃದ್ಧಿ ಪಡಿಸುತ್ತಿರುವುದು ಸಂತೋಷದ ವಿಷಯವಲ್ಲವೇ: | ಕೊಪ್ಪಳ ಜಿಲ್ಲೆ ಶ್ರೀ ಹುಲಿಗೆಮ್ಮ ದೇವಸ್ಥಾನವು ಪ್ರವರ್ಗ 'ಎ' ಶ್ರೇಣಿಯ ದೇವಸ್ಥಾನವಾಗಿದ್ದು, ಸದರಿ ದೇವಾಲಯದಲ್ಲಿ 2019 ರಿಂದ ವ್ಯವಸ್ಥಾಪನಾ ಸಮಿತಿ ಇರುವುದಿಲ್ಲ.<br><br>ಸದರಿ ದೇವಸ್ಥಾನದ ಆಡಳಿತಾಧಿಕಾರಿ/ ಕಾರ್ಯನಿರ್ವಹಣಾಧಿಕಾರಿ ಇವರು ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಕಾಯ್ದೆ 1997 ನಿಯಮಾವಳಿಗಳು 2002 ರ ನಿಯಮ 40(ಎ) ರನ್ವಯ ಕ್ರಮವಹಿಸಲಾಗಿದೆ. |
| ಇ) | ಇಂತಹ ದೇವಸ್ಥಾನವನ್ನು ಸರ್ಕಾರ ಅಭಿವೃದ್ಧಿಗೊಳಿಸಬೇಕಲ್ಲವೇ: ಇಲ್ಲದಿದ್ದಲ್ಲಿ ಭಕ್ತಾಧಿಗಳ ಭಾವನೆಗಳಿಗೆ ಧಕ್ಕೆ ಆಗುವುದಿಲ್ಲವೇ? | ದೇವಸ್ಥಾನದಲ್ಲಿ ಭಕ್ತಾದಿಗಳಿಗೆ ವಸತಿ ಸೌಕರ್ಯ, ಕುಡಿಯುವ ನೀರಿನ ಸೌಕರ್ಯ, ಶೌಚಾಲಯ ವ್ಯವಸ್ಥೆ, ನೆರಳಿನ ಶೆಡ್ಡಿನ ವ್ಯವಸ್ಥೆ, ಭಕ್ತಾದಿಗಳಿಗೆ ಅನ್ನಪ್ರಸಾದ ವ್ಯವಸ್ಥೆಯನ್ನು ಮತ್ತು ಇತರೆ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br><br>ದೇವಸ್ಥಾನಕ್ಕೆ ಸಂಬಂಧಿಸಿದಂತೆ 2ನೇ ಹಂತದ ಮಹಾ ನಕ್ಷೆಯನ್ನು ತಯಾರಿಸಲಾಗಿದ್ದು, ಸಕ್ಷಮ ಪ್ರಾಧಿಕಾರದಿಂದ ಸಭೆಯನ್ನು ನಡೆಸಿ ಅಂತಿಮಗೊಳಿಸಿದ ನಂತರ ದೇವಸ್ಥಾನದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು. |

ಸಂಖ್ಯೆ: ಕಂಇ 233 ಮುಸಪ್ರ 2022

(ಶಶಿಕಲಾ. ಅ. ಜೊಲ್ಲೆ)
ಧಾರ್ಮಿಕ ದತ್ತಿ, ಹಜ್ ಹಾಗೂ ವಕ್ಫ್ ಸಚಿವರು